NREGA

ಕರ್ನಾಟಕ ಸರ್ಕಾರ

ಸಂ. ಗ್ರಾಅಪ 86 ಉಖಾಯೋ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:20-05-2020.

# ಸೇರ್ಪಡೆ

ವಿಷಯ: ಕೋವಿಡ್-19 (ಕೊರೊನಾ ವೈರಸ್) ವ್ಯಾಪಕವಾಗಿ ಹರಡದಂತೆ ಗ್ರಾಮ ಪಂಚಾಯತಿ ಹಾಗೂ ಗ್ರಾಮ ಮಟ್ಟದ ಕಾರ್ಯಪಡೆ ರಚಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸಮಸಂಖ್ಯೆಯ ಸುತ್ತೋಲೆ ದಿನಾಂಕ 27.03.2020.
2. ಇದೇ ಸಮಸಂಖ್ಯೆ ದಿನಾಂಕ:07-04-2020ರ ಸೇರ್ಪಡೆ ಆದೇಶ.
3. ಇದೇ ಸಮಸಂಖ್ಯೆ ದಿನಾಂಕ:27-04-2020ರ ಸೇರ್ಪಡೆ ಆದೇಶ.

ಉಲ್ಲೇಖದ ಸುತ್ತೋಲೆಯಲ್ಲಿ ಪ್ರಸಕ್ತ ಸನ್ನಿವೇಶಕ್ಕನುಗುಣವಾಗಿ ಹೊಸದಾಗಿ ಗ್ರಾಮ ಪಂಚಾಯತಿ ಕಾರ್ಯಪಡೆ ಹಾಗೂ ಗ್ರಾಮ ಮಟ್ಟದ ಕಾರ್ಯಪಡೆಗಳನ್ನು ರಚಿಸಿ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಸದರಿ ಮಾರ್ಗಸೂಚಿಗೆ ಉಲ್ಲೇಖ (2)ರ ಸೇರ್ಪಡೆ ಆದೇಶದಲ್ಲಿ ಕಾರ್ಯಪಡೆಯ ಜವಾಬ್ದಾರಿಗಳಲ್ಲಿ ಕ್ರಮ ಸಂಖ್ಯೆ 26 ಮತ್ತು 27ನ್ನು ಸೇರಿಸಲಾಗಿದೆ. ಸರ್ಕಾರವು ಉಲ್ಲೇಖ(1)ರ ಸುತ್ತೋಲೆಯಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ಕಾರ್ಯಪಡೆಯನ್ನು ರಚಿಸಿರುತ್ತದೆ. ಸದರಿ ಕಾರ್ಯಪಡೆಗೆ ವಿಶೇಷಚೇತನರ ಬಗ್ಗೆ ಗಮನ ಹರಿಸಲು ಗ್ರಾಮ ಪಂಚಾಯಿತಿ ಮಟ್ಟದ ಕಾರ್ಯಪಡೆಯಲ್ಲಿ ಕ್ರಮ ಸಂಖ್ಯೆ 9(ಎ)ರ ನಂತರ ಸೇರ್ಪಡೆಗೊಳಿಸಿದೆ.

ರಾಷ್ಟ್ರೀಯ ಆರೋಗ್ಯ ಮಿಷನ್ ಸುತ್ತೋಲೆ ಸಂಖ್ಯೆ:ಎನ್‌ಎಚ್‌ಎಂ/ಡಿಡಿ/ಐಎಂಎಂ/02/2021, ದಿನಾಂಕ:22-04-2020ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಹೊರಡಿಸಿರುವ ಮಾರ್ಗಸೂಚಿಯಂತೆ ರೋಗನಿರೋಧಕ ಲಸಿಕಾ ಚುಚ್ಚುಮದ್ದು ಕಾರ್ಯಕ್ರಮವನ್ನು ಗ್ರಾಮ ಮಟ್ಟದ ಕಾರ್ಯಪಡೆಯ ಜವಾಬ್ದಾರಿಗಳಲ್ಲಿ ಕ್ರಮ ಸಂಖ್ಯೆ(27)ರ ನಂತರ (28) ಆಗಿ ಸೇರ್ಪಡೆಗೊಳಿಸಿದೆ.

(ಉಮಾ ಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:
1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.

3. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.
4. ಸಂಪಾದಕರು, ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
5. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6. ಹೆಚ್ಚುವರಿ ಪ್ರತಿ/ ಶಾಖಾ ರಕ್ಷಾ ಕಡತ.

**ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.
3. ಅಭಿವೃದ್ಧಿ ಆಯುಕ್ತರು ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ) ರವರ ಆಪ್ತ ಕಾರ್ಯದರ್ಶಿ.
7. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಬೆಂಗಳೂರು.